# Akashvani : Bangalore
# Regional Bulletin In Kannada
# 11.10.2024 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**11.10.2024 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

೧. ನಾಡಿನೆಲ್ಲೆಡೆ ಆಯುಧಪೂಜೆ ಸಡಗರ; ಮೈಸೂರು ಅರಮನೆಯಲ್ಲಿ ಪಟ್ಟದ ಹಸು, ಆನೆ, ಆಯುಧಗಳಿಗೆ ಯದುವೀರ್ ಒಡೆಯರ್ ಪೂಜೆ

೨. ರಾಜಕೀಯದಲ್ಲಿ ಟೀಕೆಗಳಿದ್ದರೆ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗಲು ಸಾಧ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ನವೆಂಬರ್ ೧ ರಂದು ಐಟಿ-ಬಿಟಿ ಸೇರಿದಂತೆ ಶಾಲಾ-ಕಾಲೇಜುಗಳಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ ಕಡ್ಡಾಯ

೪. ಕೋವಿಡ್ ಹಗರಣದ ಬಗ್ಗೆ ಎಸ್‌ಐಟಿ ತನಿಖೆ ವಿಚಾರ; ಕೇಂದ್ರ ಸಚಿವ ಕುಮಾರಸ್ವಾಮಿ ಆಕ್ಷೇಪ

೫. ಹಾವೇರಿ, ದಾವಣಗೆರೆ ಜಿಲ್ಲೆಯಲ್ಲಿ ಧಾರಾಕಾರ ಮಳೆ; ಅಪಾರ ಪ್ರಮಾಣದ ಬೆಳೆ ಹಾನಿ

**<><*<><>*><>**

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ದಸರಾ ಹಬ್ಬದ ಸಂಭ್ರಮ ಕಳೆಗಟ್ಟಿದೆ. ಮೈಸೂರು ಅರಮನೆಯಲ್ಲಿ ಶರನ್ನವರಾತ್ರಿಯ ೯ನೇ ದಿನವಾದ ಇಂದು ಸಾಂಪ್ರದಾಯಿಕವಾಗಿ ಆಯುಧಪೂಜೆ ನೆರವೇರಿತು ಮಹಾರಾಜ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಯುಧಪೂಜೆ ನೆರವೇರಿಸಿದರು. ಅರಮನೆ ಮುಂಭಾಗದಲ್ಲಿ ಪಟ್ಟದ ಹಸು, ಆನೆ, ಕುದುರೆ, ಒಂಟೆಗಳಿಗೆ, ಪಲ್ಲಕ್ಕಿ ಹಾಗೂ ರಾಜರ ಕಾರುಗಳಿಗೆ ಪೂಜೆ ಸಲ್ಲಿಸಿದರು. ಅರಮನೆಯ ಪೂರ್ವಜರು ಬಳಸುತ್ತಿದ್ದ ಆಯುಧಗಳನ್ನು ಸ್ವಚ್ಛಗೊಳಿಸಿ, ಅವುಗಳಿಗೂ ಪೂಜೆ ನೆರವೇರಿಸಲಾಯಿತು. ದಸರಾ ವೈಭವ ಕಣ್ತುಂಬಿಕೊಳ್ಳಲು ದೇಶ-ವಿದೇಶಗಳಿಂದ ಸಾಂಸ್ಕೃತಿಕ ನಗರಿ ಮೈಸೂರಿಗೆ ಲಕ್ಷಾಂತರ ಪ್ರವಾಸಿಗರು ಆಗಮಿಸಿದ್ದಾರೆ.

**<><*<><>*><>**

ರಾಜ್ಯಾದ್ಯಂತ ನವರಾತ್ರಿಯ ೯ನೇ ದಿನವಾದ ಇಂದು ಆಯುಧಪೂಜೆಯ ಸಂಭ್ರಮ ಕಳೆಗಟ್ಟಿದೆ. ದಾವಣಗೆರೆ ಜಿಲ್ಲೆಯಲ್ಲಿ ಆಯುಧಪೂಜೆ ಮತ್ತು ದಸರಾ ಮಹೋತ್ಸವದ ಸಂಭ್ರಮ ಇಮ್ಮಡಿಗೊಂಡಿದೆ. ಆಯುಧ ಪೂಜೆಯ ಭಾಗವಾಗಿ ಬೆಳಿಗ್ಗೆಯಿಂದ ಜನರು ವಾಹನಗಳನ್ನು ತೊಳೆದು

ಹೂವು, ಬಾಳೆಕಂದುಗಳನ್ನು ಕಟ್ಟಿ ಪೂಜೆ ಸಲ್ಲಿಸುತ್ತಿರುವುದು ಸಾಮಾನ್ಯವಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಆಯುಧಪೂಜೆಯನ್ನು ಶ್ರಧಾ ಭಕ್ತಿಯಿಂದ ಆಚರಿಸಲಾಯಿತು.

ಮುಂಜಾನೆಯಿಂದಲೇ ತಮ್ಮ ವಾಹನಗಳಿಗೆ ವಿವಿಧ ಬಗೆಯ ಹೂವುಗಳಿಂದ ಸಿಂಗರಿಸಿ ಪೂಜೆ ಸಲ್ಲಿಸಿದರು. ಕೋಲಾರ ಜಿಲ್ಲಾದ್ಯಂತ ಆಯುಧ ಪೂಜೆ ಹಾಗೂ ದಸರಾ ಹಬ್ಬವನ್ನು ಶ್ರದ್ಧಾ ಭಕ್ತಿ ಹಾಗೂ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಆಯುಧ ಪೂಜೆ ಹಿನ್ನಲೆ ಜಿಲ್ಲೆಯ ಹಲವು ದೇವಸ್ಥಾನದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನಡೆಯುತ್ತಿವೆ. ಚಿಕ್ಕಮಗಳೂರು ಜಿಲ್ಲೆಯಲ್ಲೂ ಆಯುಧಪೂಜೆ ಸಂಭ್ರಮ ಇಮ್ಮಡಿಗೊಂಡಿದ್ದು, ಕಾಫಿ ತೋಟಗಳಲ್ಲಿ ಮಾಲೀಕರು ತೋಟದ ಯಂತ್ರೋಪಕರಣಗಳನ್ನು ಶೃಂಗರಿಸಿ ಪೂಜೆ ಮಾಡುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು. ಹಾವೇರಿ ಜಿಲ್ಲೆಯಾದ್ಯಂತ ಆಯುಧ ಪೂಜೆ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

<><*<><>*><>

ರಾಜಕೀಯದಲ್ಲಿ ವೈರಿಗಳು ಇರುತ್ತಾರೆ, ಹಿತೈಶಿಗಳು ಇರುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಅವರು, ರಾಜಕೀಯದಲ್ಲಿ ಆರೋಗ್ಯಕರ ಟೀಕೆಗಳು ಇದ್ದಾಗಲೇ ಪ್ರಜಾಪ್ರಭುತ್ವ ಯಶಸ್ವಿಯಾಗಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಸರ್ಕಾರ ನೀಡಿರುವ ಜಾಹಿರಾತನ್ನು ಅವರು ಸಮರ್ಥಿಸಿಕೊಂಡಿದ್ದಾರೆ. ರಾಜ್ಯದ ಜನತೆ ಚಾಮುಂಡೇಶ್ವರಿ ದೇವಿಗೆ ಸುದೀರ್ಘವಾಗಿ ಅತಿ ಹೆಚ್ಚು ಬಾರಿ ಪುಷ್ಪಾರ್ಚನೆ ಮಾಡಲು ಅವಕಾಶ ನೀಡಿದ್ದಾರೆ ಎಂದು ಹೇಳಿದ ಅವರು, ನಾಡಿನ ಜನತೆಗೆ ದಸರಾ ಹಬ್ಬದ ಶುಭಾಶಯ ತಿಳಿಸಿದ್ದಾರೆ.

<><*<><>*><>

ನವೆಂಬರ್ ೧ ರಂದು ರಾಜ್ಯೋತ್ಸವವನ್ನು ಕಡ್ಡಾಯವಾಗಿ ಕನ್ನಡ ಧ್ವಜಾರೋಹಣ ಮಾಡುವ ಮೂಲಕ ಆಚರಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಲಾ, ಕಾಲೇಜು, ಐಟಿ, ಬಿಟಿ ಸಂಸ್ಥೆಗಳು, ಕಾರ್ಖಾನೆಗಳು ಇತರೇ ಖಾಸಗಿ ಸಂಸ್ಥೆಗಳು ಕಾರ್ಯಕ್ರಮ ಆಯೋಜಿಸಬೇಕು ಎಂದು ಹೇಳಿದ್ದಾರೆ.

****ಧ್ವನಿ*** ಡಿ.ಕೆ. ಶಿವಕುಮಾರ್

ಕನ್ನಡದ ನೆಲದಲ್ಲಿ ಕನ್ನಡ ಕಲಿಯಬೇಕಾಗಿರುವುದು ಪ್ರತಿಯೊಬ್ಬರ ಕರ್ತವ್ಯ. ಯಾವುದೇ ಕನ್ನಡಪರ ಸಂಘಟನೆಗಳು ಯಾವುದೇ ಸಂಸ್ಥೆಗೆ ಆಚರಣೆ ಬಗ್ಗೆ ಬೆದರಿಕೆ ಹಾಕುವಂತಿಲ್ಲ. ಒಂದು ವೇಳೆ ತೊಂದರೆ ನೀಡಿದರೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ರಾಜ್ಯ ಸರ್ಕಾರ ಅಕ್ರಮವಾಗಿ ವಾಮಮಾರ್ಗದಲ್ಲಿ ಆಡಳಿತ ನಡೆಸುತ್ತಿದೆ ಎಂದು ಕೇಂದ್ರ ಭಾರೀ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಮೈಸೂರಿನ ಚಾಮುಂಡಿಬೆಟ್ಟದಲ್ಲಿ

ದೇವಿ ದರ್ಶನ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋವಿಡ್ ಅಕ್ರಮದ ಬಗ್ಗೆ ರಾಜ್ಯ ಸರ್ಕಾರ ಸಚಿವ ಸಂಪುಟದ ನಿರ್ಣಯದಲ್ಲಿ ಎಸ್ ಐಟಿ ತನಿಖೆ ನಡೆಸಲು ಮುಂದಾಗಿದೆ. ಅಧಿಕಾರಕ್ಕೆ ಬಂದು ಒಂದು ವರ್ಷದ ಬಳಿಕ ತನಿಖೆ ನಡೆಸುವ ಅಗತ್ಯವೇನಿದೆ ಎಂದು ಪ್ರಶ್ನಿಸಿದ್ದಾರೆ.

***ಧ್ವನಿ*** ಹೆಚ್ ಡಿ ಕುಮಾರಸ್ವಾಮಿ

ಸರ್ಕಾರ ತಾನು ಮಾಡಿರುವ ತಪ್ಪುಗಳನ್ನು ಮಾರೆಮಾಚಲು ಆಡಳಿತ ದುರುಪಯೋಗ ಪಡಿಸಿಕೊಂಡು ಜಾಹೀರಾತು ನೀಡಿ ಆಡಳಿತ ನಡೆಸುತ್ತಿದೆ ಎಂದು ವ್ಯಂಗ್ಯವಾಡಿದ್ದಾರೆ.

<><*<><>*><>

ದೇಶದಲ್ಲಿ ಮಧ್ಯಮ ಮತ್ತು ಸಣ್ಣ ಕೈಗಾರಿಕೆ ಮುಖಾಂತರ ತಯಾರಿಸುವ ಉತ್ಪಾದನೆಗಳನ್ನು ಶೇಕಡ ೨೫ರಷ್ಟು ಸರ್ಕಾರ ಖರೀದಿ ಮಾಡಲಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ. ಮೈಸೂರಿನ ಅರಮನೆ ಆವರಣದಲ್ಲಿ ಗಜಪಡೆಯ ಆನೆ, ಮಾವುತರು ಹಾಗೂ ಕಾವಾಡಿಗಳೊಂದಿಗೆ ಉಪಹಾರ ಕೂಟದಲ್ಲಿ ಭಾಗವಹಿಸಿ ಮಾತನಾಡಿದ ಅವರು, ದೇಶದಲ್ಲಿ ಕೃಷಿಯ ನಂತರ ಹೆಚ್ಚು ಉದ್ಯೋಗ ನೀಡುತ್ತಿರುವುದು ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳು. ಇವುಗಳ ಮೂಲಕ ೨೧ ಕೋಟಿ ಜನರಿಗೆ ಉದ್ಯೋಗ ನೀಡಿದ್ದು, ಗುಡಿ ಕೈಗಾರಿಕೆಗಳ ಮೂಲಕ ಮಹಾತ್ಮ ಗಾಂಧೀಜಿ ಅವರ ಕನಸನ್ನು ನನಸು ಮಾಡಲು ಮುಂದಾಗಿದ್ದೇವೆ ಎಂದು ಹೇಳಿದ್ದಾರೆ.

***ಧ್ವನಿ** ಶೋಭಾ ಕರಂದ್ಲಾಜೆ

<><*<><>*><>

ಹಾವೇರಿ ಜಿಲ್ಲೆಯಾದ್ಯಂತ ಧಾರಾಕಾರ ಮಳೆಯಾಗಿದೆ. ಮಳೆಯಿಂದಾಗಿ ೪೭ ಮನೆಗಳಿಗೆ ಹಾನಿ ಸಂಭವಿಸಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಜಿಲ್ಲೆಯ ಸವಣೂರು ತಾಲೂಕಿನ ಕಳಸೂರಿನಲ್ಲಿ ಸುರಿದ ಮಳೆಗೆ ವರದಾ ನದಿಗೆ ನಿರ್ಮಿಸಿರುವ ಬ್ರಿಡ್ಜ್ ಕಂ ಬ್ಯಾರೇಜ್ ಮುಳುಗಡೆಯಾಗಿದೆ. ಜಿಲ್ಲೆಯಲ್ಲಿ ಹರಿಯುವ ತುಂಗಭದ್ರಾ, ವರದಾ, ಕುಮದ್ವತಿ ನದಿಗಳು ಹಾಗೂ ಹಳ್ಳಗಳಲ್ಲಿ ನೀರಿನ ಮಟ್ಟ ಏರಿಕೆಯಾಗಿದೆ. ಮಳೆಯಿಂದಾಗಿ ಕಟಾವಿಗೆ ಬಂದಿದ್ದ ಶೇಂಗಾ, ಸೋಯಾಬಿನ್, ಮೆಕ್ಕೆಜೋಳ, ಹತ್ತಿ ಸೇರಿದಂತೆ ವಿವಿಧ ಬೆಳೆಗಳಿಗೆ ಹಾನಿ ಸಂಭವಿಸಿದೆ. ಮಳೆಯಿಂದ ಹಾವೇರಿಯ ಹಳೇ ರಾಷ್ಟ್ರೀಯ ಹೆದ್ದಾರಿ ರಸ್ತೆ ಹಾಗೂ ಹಲವು ರಸ್ತೆಗಳಲ್ಲಿ ನೀರು ನಿಂತಿದ್ದು, ಸ್ಥಳಕ್ಕೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗ್ಯಾಸ್ ಪೈಪ್‌ಲೈನ್ ಅಳವಡಿಕೆಗಾಗಿ ತೆಗೆದಿರುವ ಜಾಗದಲ್ಲಿ ಉಂಟಾಗಿರುವ ಗುಂಡಿಗಳನ್ನು ವೈಜ್ಞಾನಿಕವಾಗಿ ಮುಚ್ಚುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ದಾವಣಗೆರೆ ಜಿಲ್ಲೆಯಲ್ಲೂ ವ್ಯಾಪಕ ಮಳೆ ಸುರಿಯುತ್ತಿದ್ದು, ಕೆರೆ, ಕಟ್ಟೆ, ಚೆಕ್ ಡ್ಯಾಂಗಳು ತುಂಬಿವೆ. ಕಳೆದ ರಾತ್ರಿ ಸುರಿದ ಭಾರಿ ಮಳೆಗೆ ಮಾಯಕೊಂಡ ಹೋಬಳಿ ವ್ಯಾಪ್ತಿಯ ಹೆಚ್.ರಾಂಪುರ ಗ್ರಾಮದ ಕೆರೆ ಸಂಪೂರ್ಣ ಭರ್ತಿಯಾಗಿ ಕೋಡಿಯಲ್ಲಿ ನೀರು ಹರಿದು ಹೋಗುತ್ತಿದೆ. ನ್ಯಾಮತಿ, ಬಸವಾಪಟ್ಟಣ, ಚನ್ನಗಿರಿ ಸೇರಿದಂತೆ ಜಿಲ್ಲೆಯ

ಹಲವು ಗ್ರಾಮಗಳಲ್ಲಿ ಗುಡುಗು-ಸಿಡಿಲು ಸಹಿತ ಭಾರಿ ಮಳೆಯಾಗಿದ್ದು, ಭತ್ತ ಮತ್ತು ಕೊಯ್ಲಿಗೆ ಬಂದಿದ್ದ ಮೆಕ್ಕೆಜೋಳದ ಬೆಳೆ ಹಾನಿ ಸಂಭವಿಸಿದೆ.

**<><*<><>*><>**

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ತೊರೆಕಾಡನಹಳ್ಳಿಯ ಕಾವೇರಿ ಐದನೇ ಹಂತದ ಕುಡಿಯುವ ನೀರಿನ ಯೋಜನೆ ಲೋಕಾರ್ಪಣೆಯನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಆವರಣದಲ್ಲಿ ಇದೇ ೧೬ರಂದು ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಲೋಕಾರ್ಪಣೆ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಬೆಂಗಳೂರು, ಮಂಡ್ಯ, ರಾಮನಗರ ಜಿಲ್ಲಾ ವ್ಯಾಪ್ತಿಯ ಸಚಿವರು, ಸಂಸದರು, ಶಾಸಕರು ಭಾಗಿಯಾಗಲಿದ್ದಾರೆ. ಈ ಯೋಜನೆಯಡಿ ಬೆಂಗಳೂರಿನ ಯಲಹಂಕ, ಯಶವಂತಪುರ, ಬೆಂಗಳೂರು ದಕ್ಷಿಣ, ಬ್ಯಾಟರಾಯನಪುರ, ಬೊಮ್ಮನಹಳ್ಳಿ ವಲಯದ ಮನೆ ಮನೆಗೂ ಕಾವೇರಿ ನೀರು ಪೂರೈಕೆಯಾಗಲಿದ್ದು, ೪ ಸಾವಿರದ ೩೩೬ ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ.

**<><*<><>*><>**

ಬ್ಯಾಂಕುಗಳು ರೈತರ ಹಿತ ಕಾಪಾಡಬೇಕು. ಸಾಲ ಮರು ಪಾವತಿ ಸಂದರ್ಭದಲ್ಲಿ ಬೆದರಿಕೆ ಹಾಕಬಾರದು ಎಂದು ಉಡುಪಿ- ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಹೇಳಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**